# ಕರ್ನಾಟಕ ಸರ್ಕಾರ

## ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರು ಇವರು ಹೊರಡಿಸಿರುವ ನಡವಳಿಗಳು

ವಿಷಯ: ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ 2368/2011 ಪ್ರಕರಣದಲ್ಲಿ ದಿನಾಂಕ: 09-02-2017ರ ತೀರ್ಪಿನ ಹಿನ್ನೆಲೆಯಲ್ಲಿ ಶಿಕ್ಷಕರ/ಸಹಾಯಕ ಶಿಕ್ಷಕರ ವೃಂದದ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಹೊರಡಿಸುವ ಬಗ್ಗೆ .

ಉಲ್ಲೇಖ:

1 ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾನಿಯಮ-1), ಸಿಆಸುಇ/ 182/ ಸೇನೆನಿ/2011,ದಿನಾಂಕ: 06.05.2017.

2. ಶಿಕ್ಷಕ/ಸಹಾಯಕ ಶಿಕ್ಷಕ ವೃಂದದಿದಂದ ಮುಖ್ಯೋಪಾಧ್ಯಾಯ ವೃಂದಕ್ಕೆ ಮುಂಬಡ್ತಿ ನೀಡಿರುವ ಆದೇಶ ದಿನಾಂಕ : 27.04.2000, 30.01.2002, 04.06.2009 ಮತ್ತು ದಿನಾಂಕ 19.05.2011.

3. ಶಿಕ್ಷಕ/ಸಹಾಯಕ ಶಿಕ್ಷಕ ವೃಂದದ ದಿನಾಂಕ 01.01.1990 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ:ನಿಮಮ/ಜೇಷ್ಠತೆಶಿಕ್ಷಕ/90-91,ದಿನಾಂಕ:03.10.1991.

4. ಶಿಕ್ಷಕ/ಸಹಾಯಕ ಶಿಕ್ಷಕ ವೃಂದದ ದಿನಾಂಕ 01.01.2006 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ನಿಮಮ/ಜೇಷ್ಠತೆ/ಶಿಕ್ಷಕ/8/2006-07, ದಿನಾಂಕ: 24.01.2007.

5. ಶಿಕ್ಷಕ/ಸಹಾಯಕ ಶಿಕ್ಷಕ ವೃಂದದ ದಿನಾಂಕ 01.01.2013 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ನಿಮಅಇ/ಜೇಷ್ಠತೆ/ಶಿಕ್ಷಕ/ಮುಖ್ಯ/11/2013-14, ದಿನಾಂಕ: 22.09.2014.

6. ಶಿಕ್ಷಕ/ಸಹಾಯಕ ಶಿಕ್ಷಕ ವೃಂದದ ದಿನಾಂಕ 01.01.2015 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ನಿಮಅಇ/ಜೇಷ್ಠತೆ/ಶಿಕ್ಷಕ-ಸ.ಶಿಕ್ಷಕ/21/2015-16, ದಿನಾಂಕ: 21.07.2015.

----------

ಪ್ರಸ್ತಾವನೆ: ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ 2368/2011 ಬಿ.ಕೆ. ಪವಿತ್ರ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ದಿನಾಂಕ:09.02.2017 ರಂದು ನೀಡಿರುವ ತೀರ್ಪಿನಲ್ಲಿ ರಾಜ್ಯ ಸರ್ಕಾರದ ನಾಗರೀಕ ಸೇವೆಗಳನ್ನು **"Karnataka Determination of Seniority of Govt servants promoted on the basis of Reservation Act 2002"** ರ ಸೆಕ್ಷನ್ 3 ಮತ್ತು 4ನ್ನು ಸಂವಿಧಾನದ ಅನುಚ್ಛೇಧ 14 ಮತ್ತು 16 ನ್ನು ಅಧಿಕಾರಾತೀತ (**ultra vires**) ಎಂದು ಆದೇಶಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖ(1)ರ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆದೇಶದಲ್ಲಿ ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ದಿನಾಂಕ: 27.04.1978 ರಿಂದ 01.01.2017 ರವರೆಗೆ ನೀಡಿರುವ ಮುಂಬಡ್ತಿಗಳಲ್ಲಿ ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡ ನೌಕರರಿಗೆ ಮೀಸಲಾತಿ ಅನುಸರಿಸಿರುವ ಅಧಿಕಾರಿಗಳ/ನೌಕರರ ಜೇಷ್ಠತಾ ಪಟ್ಟಿಗಳನ್ನು ಪುನರ್‌ಪರಿಶೀಲಿಸಲು ಆದೇಶಿಸಲಾಗಿದೆ. ಅದರಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ದಿನಾಂಕ: 27.04.1978 ರಿಂದ 01.01.2017 ರವರೆಗೆ ಹೊರಡಿಸಲಾಗಿರುವ ಅಧಿಕಾರಿ/ನೌಕರರ ಜೇಷ್ಠತೆ ಪುನರ್ ಪರಿಶೀಲಿಸಿ, ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಹೊರಡಿಸಬೇಕಿದೆ.